# ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ: ಕೇಂದ್ರಕಛೇರಿ: ಬೆಂಗಳೂರು

## ಪತ್ರಿಕಾ ಪ್ರಕಟಣೆ

**ವಿಷಯ: ರಾಜ್ಯ ರಸ್ತೆ ಸಾರಿಗೆ ನಿಗಮಗಳ ದರ್ಜೆ–3 ಮೇಲ್ವಿಚಾರಕೇತರ ಮತ್ತು ದರ್ಜೆ–4 ನೌಕರರಅಂತರ ನಿಗಮ ವರ್ಗಾವಣೆಕೋರಿಕೆಗಾಗಿಅನ್‌ಲೈನ್‌ಅರ್ಜಿ ಸಲ್ಲಿಕೆತಂತ್ರಾಂಶ**

ಕರ್ನಾಟಕ ಸರ್ಕಾರವು ಆದೇಶ ಸಂಖ್ಯೆ: ಟಿಡಿ 45 ಟಿಸಿಎಸ್ 2020, ದಿನಾಂಕ:09–03–2021 ಹಾಗೂ ಟಿಡಿ 45 ಟಿಸಿಎಸ್ 2020, ದಿನಾಂಕ:23–03–2021 ರನ್ವಯ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಬೆಂ.ಮ.ಸಾ.ನಿಗಮ, ಈ.ಕ.ರ.ಸಾ.ನಿಗಮ ಮತ್ತು ವಾ.ಕ.ರ.ಸಾ.ನಿಗಮಗಳ ದರ್ಜೆ–3 ಮೇಲ್ವಿಚಾರಕೇತರ ಮತ್ತು ದರ್ಜೆ–4 ರ ನೌಕರರಿಗೆ ಅಂತರ ನಿಗಮ ವರ್ಗಾವಣೆಗೆ ಅವಕಾಶ ಕಲ್ಪಿಸಲಾಗಿದೆ.

ತತ್ಸಂಬಂದ, ಕ.ರಾ.ರ.ಸಾ.ನಿಗಮವು ಸುತ್ತೋಲೆ ಸಂಖ್ಯೆ:1690 ದಿನಾಂಕ:26–03–2021 ರಲ್ಲಿ ವರ್ಗಾವಣೆ ನಿರ್ದೇಶನಗಳನ್ನು ನೀಡಲಾಗಿದ್ದು, ವರ್ಗಾವಣೆ ಪ್ರಕ್ರಿಯೆ ದಿನಾಂಕ: 01–04–2021 ಬೆಳಿಗ್ಗೆ 11:00 ಗಂಟೆಯಿಂದ ಪ್ರಾರಂಭವಾಗಿದ್ದು, ದಿನಾಂಕ:30–04–2021 ರ ಸಂಜೆ 5:30 ರವರೆಗೆ ಆನ್–ಲೈನ್ ಮೂಲಕ www.ksrtc.org/transferರಲ್ಲಿಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದ್ದು, ನೌಕರರು ಸದರಿ ಸೌಲಭ್ಯದಉಪಯೋಗವನ್ನು ಪಡೆಯಲು ತಿಳಿಸಲಾಗಿದೆ.

ಅಂತರ ನಿಗಮ ವರ್ಗಾವಣೆ ಅನ್‌ಲೈನ್ ಅರ್ಜಿ ಸಲ್ಲಿಕೆ ತಂತ್ರಾಂಶಕ್ಕೆ ಶ್ರೀ. ಶಿವಯೋಗಿ.ಸಿ.ಕಳಸದ ಭಾಆಸೇ, ವ್ಯವಸ್ಥಾಪಕ ನಿರ್ದೇಶಕರು, ಕೆಎಸ್‌ಆರ್‌ಟಿಸಿರವರು ಚಾಲನೆ ನೀಡಿದರು. ಈ ಸಂದರ್ಬದಲ್ಲಿ ಶ್ರೀ.ಟಿ.ವೆಂಕಟೇಶ್, ಭಾಆಸೇ, ನಿರ್ದೇಶಕರು (ಸಿಬ್ಬಂದಿ&ಪರಿಸರ), ಕೆಎಸ್‌ಆರ್‌ಟಿಸಿ, ಶ್ರೀ.ಅರುಣ್ ಕೆ, ಭಾಪೋಸೇ, ನಿರ್ದೇಶಕರು, (ಭದ್ರತಾ&ಜಾಗೃತ) ಬಿ.ಎಂ.ಟಿ.ಸಿ. ಶ್ರೀ. ವೈ. ದೇವರಾಜು, ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು ಕೆಎಸ್‌ಆರ್‌ಟಿಸಿ ಉಪಸ್ಥಿತರಿದ್ದರು.

ಸಹಿ/–

ಮುಖ್ಯ ಸಾರ್ವಜನಿಕ ಸಂಪರ್ಕಾಧಿಕಾರಿ